ಸಕ್ಕರೆಯನ್ನು ಅಷ್ಟಾಗಿ ಉಪಯೋಗಿಸುವುದಿಲ್ಲ. ಆದರೆ ಪಟ್ಟಣದ ಪಡಿತರ ಚೀಟಿದಾರರು ಸರ್ಕಾರದಿಂದ ವಿತರಿಸುವ ಪಡಿತರಗಳನ್ನು ಅವಲಂಬಿಸಿರುತ್ತಾರೆ. ಆದ್ದರಿಂದ ಪಟ್ಟಣದ ಪಡಿತರ ಚೀಟಿದಾರರಿಗೆ ಸ್ವಲ್ಪ ಮಟ್ಟಿಗೆ ಹೆಚ್ಚಿಗೆ ಪಡಿತರ ವಿತರಣೆಗೆ ಅವಕಾಶ ಕಲ್ಪಿಸಲಾಗಿದೆ. ಅದೂ ಅಲ್ಲದೆ ಗ್ರಾಮಾಂತರ ಪಡಿತರ ಚೀಟಿದಾರರ ಸಂಖ್ಯೆ ಪಟ್ಟಣದವರಿಗಿಂತ ಹೆಚ್ಚಿನ ಸಂಖ್ಯೆಯಲ್ಲಿರುತ್ತದೆ. ರಾಜ್ಯ ಸರ್ಕಾರವು ರಾಜ್ಯಕ್ಕೆ ಬೇಡಿಕೆ ಇರುವಷ್ಟು ಸಕ್ಕರೆ ಮತ್ತು ಸೀಮೆಎಣ್ಣೆಯನ್ನು ಬಿಡುಗಡೆ ಮಾಡಲು ಆಗಿಂದಾಗ್ಗೆ ಒತ್ತಾಯಿಸಲಾಗುತ್ತದೆ. ಕೇಂದ್ರವು ಹೆಚ್ಚಿನ ಪ್ರಮಾಣದಲ್ಲಿ ಬಿಡುಗಡೆ ಮಾಡಿದಾಗ ಈ ತಾರತಮ್ಯವನ್ನು ಸ್ವಲ್ಪಮಟ್ಟಿಗೆ ನಿವಾರಿಸಬಹುದು.

ರಾಜ್ಯದಲ್ಲಿ ಸಾಮೂಹಿಕ ವಿವಾಹ, ಜಾತ್ರೆ ಮತ್ತು ಧಾರ್ಮಿಕ ಉತ್ಸವಗಳ ಸಂದರ್ಭದಲ್ಲಿ ಹಸಿರುಕಾರ್ಡು ಬೆಲೆಯಲ್ಲಿ ಅವಶ್ಯಕ ಆಹಾರ ಸಾಮಗ್ರಿಗಳ ವಿತರಣೆ

236 (746) ಶ್ರೀ ಪಿ.ಸಿ. ಸಿದ್ದನಗೌಡರ್ (ಕಲಘಟಗಿ):-

ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸಾಮೂಹಿಕ ವಿವಾಹ ಸಮಾರಂಭ ಮಾಡುವವರಿಗೆ ಹಾಗೂ ಹಳ್ಳಿಗಳಲ್ಲಿ ಜಾತ್ರೆ ಸಂದರ್ಭದಲ್ಲಿ ಮತ್ತು ಇತರೆ ಧಾರ್ಮಿಕ ಉತ್ಸವ ಸನ್ನಿವೇಶದಲ್ಲಿ ಹೆಚ್ಚು ಅಕ್ಕಿ, ಗೋಧಿ, ಸಕ್ಕರೆ, ರವೆ, ಎಣ್ಣೆ ಮುಂತಾದ ಅವಶ್ಯಕ ವಸ್ತುಗಳನ್ನು ಹಸಿರು ಕಾರ್ಡುಬೆಲೆಯಲ್ಲಿ ಪೂರೈಸುವ ವಿಚಾರ ಏನಾದರು ಸರ್ಕಾರದ ಗಮನದಲ್ಲಿದೆಯೇ;

ಆ) ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು;

ಇ) ಇಲ್ಲದಿದ್ದಲ್ಲಿ, ಅದಕ್ಕೆ ಕಾರಣವೇನು ?

ಶ್ರೀಮತಿ ಮನೋರಮ ಮಧ್ವರಾಜ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):-

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ರಾಜ್ಯಸರ್ಕಾರಕ್ಕೆ ಪಡಿತರ ವಸ್ತುಗಳ ಹಂಚಿಕೆ ಅವಶ್ಯಕತೆಗಿಂತ ಕಡಿಮೆಯಾಗಿದೆ. ಸಹಾಯ ಧನಯುಕ್ತ ಆಹಾರ ಧಾನ್ಯಗಳ ವಿತರಣೆ ಯೋಜನೆ (ತ್ರಿವರ್ಣ ಪಡಿತರ ಚೀಟಿ)ಗಾಗಿ ರಾಜ್ಯಸರ್ಕಾರವು ಸಹಾಯಧನ ನೀಡುತ್ತಿದೆ. ಯಾವುದೇ ಧಾರ್ಮಿಕ ಉತ್ಸವಗಳಿಗಾಗಿ ಅಕ್ಕಿ, ಗೋಧಿ, ಸಕ್ಕರೆ ಇನ್ನಿತರ ಅಗತ್ಯವಸ್ತುಗಳನ್ನು ಹೆಚ್ಚುವರಿಯಾಗಿ ನೀಡುವುದರಿಂದ ರಾಜ್ಯ ಸರ್ಕಾರವು ಹೆಚ್ಚಿನ ಸಹಾಯಧನದ ಹೊರೆ ಹೊರಬೇಕಾಗುತ್ತದೆ. ಅಲ್ಲದೆ ತ್ರಿವರ್ಣ ಪಡಿತರ ಚೀಟಿದಾರರಿಗೆ ಮೀಸಲಾದ ಪ್ರಮಾಣವನ್ನು ಬೇರೆ ಉದ್ದೇಶಗಳಿಗಾಗಿ ಬಳಸುವುದು ಸಾಧ್ಯವಿಲ್ಲವಾಗಿದೆ.

ಬೀದರ್‌ನಲ್ಲಿ ರಾಜ್ಯರಸ್ತೆ ಸಾರಿಗೆ ಸಂಸ್ಥೆಯ ಪ್ರಾದೇಶಿಕ ಕಾರ್ಯಾಗಾರವನ್ನು ಸ್ಥಾಪನೆ

216 (657) ಶ್ರೀ ನಾರಾಯಣರಾವ್ ಮನಹಳ್ಳಿ (ಬೀದರ್) ಮತ್ತು ಶ್ರೀ ಗುರುಪಾದಪ್ಪ ನಾಗ್ಮಾರಪಳ್ಳಿ (ಔರಾದ್):-

ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?